## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s SS Renewable Energy Ventures Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ತತ್ವಶಃ ಅನುಮತಿ ನೀಡಿರುವ 4 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಸ್ಥಳದಲ್ಲಿ 19.5 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಪತ್ರ ಸಂಖ್ಯೆ: ಇಎನ್ 84 ಎನ್‌ಸಿಇ 2013 ದಿನಾಂಕ:22.05.2013.
2) ಸರ್ಕಾರದ ಪತ್ರ ಸಂಖ್ಯೆ: ಇಎನ್ 161 ಎನ್‌ಸಿಇ 2014 ದಿನಾಂಕ:20.08.2014.
3) ಸರ್ಕಾರದ ಪತ್ರ ಸಂಖ್ಯೆ: ಇಎನ್ 23 ಎನ್‌ಸಿಇ 2016(1)ದಿನಾಂಕ:11.02.2016.
4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/SSREVPL-Gollarahatti (4 MW)11/904-S.

4368
05/12/17
ಬೆಂಗಳೂರು

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಪತ್ರದಲ್ಲಿ ಯೋಜನಾ ಅನುಷ್ಠಾನಕ್ಕೆ ಅಗತ್ಯವಿರುವ ಇಲಾಖೆಗಳ/ನಿಗಮಗಳ ನಿರಾಕ್ಷೇಪಣೆ ಪಡೆದು, ಒಂದು ವರ್ಷದೊಳಗಾಗಿ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿದ ನಂತರವೇ ವಾಸ್ತವಿಕ ಸಾಮರ್ಥ್ಯಕ್ಕೆ ಅನುಸಾರವಾಗಿ ಸರ್ಕಾರಿ ಆದೇಶ ಹೊರಡಿಸಲಾಗುವುದೆಂಬ ಷರತ್ತುಗಳೊಂದಿಗೆ 1 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ.

A (Tech) KREDL

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಪತ್ರದಲ್ಲಿ ನವೀಕರಿಸಬಹುದಾದ ಇಂಧನ ನೀತಿ 2009–14 ಮತ್ತು ಸರ್ಕಾರ ತಿದ್ದುಪಡಿ ಆದೇಶ ಸಂಖ್ಯೆ : ಇಎನ್ 07 ಎನ್‌ಸಿಇ 2011, ದಿನಾಂಕ : 18.07.2011 ರಂತೆ ದಿನಾಂಕ : 22.05.2013 ರ ತತ್ವಶಃ ಅನುಮೋದನೆಯ ಪತ್ರವನ್ನು ಮಾರ್ಪಡಿಸಿ, ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ಸಲ್ಲಿಸುವ ಅವಧಿಯನ್ನು ದಿನಾಂಕ :22.05.2013 ರಿಂದಲೇ ಜಾರಿಗೆ ಬರುವಂತೆ 2(ಎರಡು) ವರ್ಷಗಳ ಕಾಲಾವಕಾಶವನ್ನು ಕಲ್ಪಿಸಿ, 4 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಅವಕಾಶ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಪತ್ರದಲ್ಲಿ ಸದರಿ 4 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಘಟಕ ಸ್ಥಾಪಿಸಲು ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಲು ನೀಡಿರುವ ತತ್ವಶಃ ಅನುಮತಿಯ ಅವಧಿಯನ್ನು ದಿನಾಂಕ : 22.05.2016 ರವರೆಗೆ ವಿಸ್ತರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು M/s SS Renewable Energy Ventures Private Limited ಕಂಪನಿಯು ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದ್ದಲಮಚ್ಚಿಗೇರಿ, ಭರಮಸಮುದ್ರ, ಗೊಲ್ಲರಹಟ್ಟಿ, ಗೋಗುಡು, ತಮ್ಮಲಾಪುರ, ಹನುಮಂತಪುರ ಮತ್ತು ಬಂಗಾರಕ್ಕನಗುಡ್ಡ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 19.4 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

Wind Section
vard No. 2619
Date: 06-12-17
Sig.

.....2)

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 250 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 29.11.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s SS Renewable Energy Ventures Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದ್ದಲಮಚ್ಚಿಗೇರಿ, ಭರಮಸಮುದ್ರ, ಗೊಲ್ಲರಹಟ್ಟಿ, ಗೋಗುಡು, ತಮ್ಮಲಾಪುರ, ಹನುಮಂತಪುರ ಮತ್ತು ಬಂಗಾರಕ್ಕನಗುಡ್ಡ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 19.5 ಮೆ.ವ್ಯಾಟ್ ಸಾಮರ್ಥ್ಯಕ್ಕೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ.

**Schedule**

**The Geographical area description of 19.50 MW Capacity Wind power project**

| SL No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 57 B/6 | 19.5 MW<br><br>(13 Nos x 1500 kW) | Kasvanahalli, Gorlakatte, Goguddu, Timmalapur, Siddammanahalli, Bangrakanagudda and Madalamachikere in Jagalur, Davangere | The area Surrounded by Point-A-B-C-D-E-F-G-H-I-J-K-L-M-M-A<br>The proposed area is in plain land near Jagalur also crossing of NH-13 and also crossing chalakere road and also some water bodies in the area is held in the following Geographical co-ordinates as:<br><br>Point A: Lat: 14°31'16.32'' - Long: 76°20'25.44'' N<br>Point B: Lat: 14°31'48.36" - Long:76°20'0.96'' N<br>Point C: Lat: 14°32'55.68'' - Long: 76°20'51.36''N<br>Point D: Lat: 14°34'14.52'' - Long: 76°21'5.4'' N<br>Point E: Lat: 14°34'8.04'' - Long: 76°22'54.58'' N<br>Point F: Lat: 14°32'34.08'' - Long: 76°22'49''N<br>Point G: Lat: 14°31'52.32" - Long:76°23'17.52''N<br>Point H: Lat: 14°31'30.72'' - Long: 76°24'6.84'' N<br>Point I: Lat: 14°31'30'' - Long: 76°24'55.8''N<br>Point J: Lat: 14°32'44.88'' - Long: 76°25'8.04''N<br>Point K: Lat: 14°32'0'' - Long: 76°24'55.8''N<br>Point L: Lat: 14°29'41.28'' - Long: 76°25'46.2''N<br>Point M: Lat: 14°29'39.48'' - Long: 76°22'57.72''N<br>Point N: Lat: 14°31'18.84'' - Long: 76°21'56.52''N<br><br>Peaks: 715, 666, 678, 662, 642 & 649 m AMSL |
| | **Total** | **19.5 MW** | | |

ಷರತ್ತುಗಳು

1 ಸದರಿ ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

....3)

2 M/s SS Renewable Energy Ventures Private Limited ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಇ.ಆರ್.ಸಿ ರವರು ಅನುಮೋದಿಸಿ ಚಾಲ್ತಿಯಲ್ಲಿರುವ ದರದಲ್ಲಿ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಸರ್ಕಾರದ ಆದೇಶ ಸಂಖ್ಯೆ : ಇಎನ್ 93 ವಿಎಸ್‌ಇ 2017 ದಿನಾಂಕ : 27.10.2017 ರಲ್ಲಿನ ಅಂಶಗಳನ್ನು ಅನುಸರಿಸುವ ಷರತ್ತುಗಳಿಗೊಳಪಟ್ಟು ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

3 M/s SS Renewable Energy Ventures Private Limited ಕಂಪನಿಯು ಸರ್ಕಾರದ ಆದೇಶ ಸಂಖ್ಯೆ : ಇಎನ್ 246 ಎನ್‌ಸಿಇ 2010 ದಿನಾಂಕ : 15.02.2011 ರಲ್ಲಿ ಸಾಮರ್ಥ್ಯ ಹೆಚ್ಚಳಗೊಂಡ 77.4 ಮೆ.ವ್ಯಾ. ಸಾಮರ್ಥ್ಯಕ್ಕೂ ಸಹ ನಿಯಮಾನುಸಾರ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು ಹಾಗೂ ಕೆ.ಆರ್.ಇ.ಡಿ.ಎಲ್. ಸಂಸ್ಥೆಯು ಕಾಲಾವಧಿ ವಿಸ್ತರಣೆಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದ ಅನುಮೋದನೆಯ ನಂತರ ಒಡಂಬಡಿಕೆ ಮಾಡಿಕೊಳ್ಳುವುದು.

4 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಪತ್ರ ಸಂಖ್ಯೆ: ಇಎನ್ 84 ಎನ್‌ಸಿಇ 2013 ದಿನಾಂಕ:22.05.2013, ಸರ್ಕಾರದ ಪತ್ರ ಸಂಖ್ಯೆ: ಇಎನ್ 161 ಎನ್‌ಸಿಇ 2014 ದಿನಾಂಕ:20.08.2014 ಮತ್ತು ಸರ್ಕಾರದ ಪತ್ರ ಸಂಖ್ಯೆ: ಇಎನ್ 23 ಎನ್‌ಸಿಇ 2016(1) ದಿನಾಂಕ:11.02.2016.ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
6 ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ.

...4)